# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್-145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ). ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:20/03/2021 ರಂದು ಶನಿವಾರ ಬೆಳಗ್ಗೆ. 12.30 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿ ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಸದಸ್ಯರಿಗೆ ಸ್ವಾಗತ ಕೋರುತ್ತಾ, ಸಭೆಯ ವಾರ್ಡ್ ಸಮಿತಿ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

ಹಾಜರಿದ್ದವರು:-

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ವಾರ್ಡ್ 145ಕ್ಕೆ ಸಂಬಂಧಪಟ್ಟಂತ AE, SHI, JHI, RI & BESCOM,
3. ಪೋಲೀಸ್ ಸಿಬ್ಬಂದಿ ವರ್ಗದವರು ವಿಲ್ಸನ್ ಗಾರ್ಡನ್ ಠಾಣೆ.
4. ಶುಚಿ ಮಿತ್ರ ಸಂಘದ ಸದಸ್ಯರು, ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು

*********

1. ವಿಲ್ಸನ್‌ಗಾರ್ಡನ್ 7, 8 ಮತ್ತು 9ನೇ ಅಡ್ಡರಸ್ತೆಗಳಲ್ಲಿ ಮತ್ತು ಲಾಲ್‌ಬಾಗ್ ಹಾಪಕ್‌ಮ್ಸ್ ಗೇಟ್ ಮುಂಭಾಗಲ್ಲಿ ಹಾಗೂ ಬಿಟಿಎಸ್ ರಸ್ತೆಯಲ್ಲಿ ವಿದ್ಯುತ್ ದೀಪಗಳು ಹಾಳಾಗಿರುವ ಬಗ್ಗೆ ಸಾರ್ವಜನಿಕರು ದೂರಿದರು ಸಂಬಂಧಪಟ್ಟಂತೆ ವಿದ್ಯುತ್ ಇಂಜಿನಿಯರಿಂಗ್ ವಿಭಾಗ, ಬಿಬಿಎಂಪಿ ರವರಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯ ಹರಿಲಕ್ಷ್ಮಿ ಥಿಯೇಟರ್ ಹಾಗೂ ಬೇರೆ ಬೇರೆ ರಸ್ತೆಗಳಲ್ಲಿ ಕಸದ ವಾಹನಗಳನ್ನು ನಿಲ್ಲಿಸುತ್ತಿದ್ದು, ಸದರಿ ವಾಹನಗಳನ್ನು ಚಿನ್ನಯ್ಯನಪಾಳ್ಯದ ಬಿಬಿಎಂಪಿ ಖಾಲಿ ಜಾಗದಲ್ಲಿ ಒಂದೇ ಕಡೆ ನಿಲ್ಲಿಸುವಂತೆ ಸೂಚಿಸಲಾಯಿತು.
3. ಅಣ್ಣೀಪುರ ಮುಖ್ಯರಸ್ತೆ ಹಾಗೂ 1ನೇ ಅಡ್ಡರಸ್ತೆಯಲ್ಲಿ ಕಸವನ್ನು ಪ್ರತಿನಿತ್ಯ ಸಂಗ್ರಹಿಸದಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ಪ್ರಸ್ತಾಪಿಸಿದ್ದು, ಸಂಬಂಧಿಸಿದಂತೆ, ಕಿರಿಯ ಆರೋಗ್ಯ ಪರಿವೀಕ್ಷರು ಹಾಗೂ ಮೇಲ್ವಿಚಾರಕರನ್ನು ಸೂಕ್ತ ಕ್ರಮ ವಹಿಸುವಂತೆ ಸೂಚಿಸಲಾಯಿತು.



Scanned with CamScanner

4. ಆನೆ ಪಾರ್ಕ್‌ನ ಒಳಭಾಗದಲ್ಲಿ ಸರಿಯಾದ ನಿರ್ವಹಣೆ ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ನಿರ್ವಹಣೆ ಬಗ್ಗೆ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸಲಾಯಿತು.
5. ವಾರ್ಡ್ ವ್ಯಾಪ್ತಿಯಲ್ಲಿ ಸಾಕಷ್ಟು ಕಡೆ ಸೊಳ್ಳೆಗಳ ತೊಂದರೆಯಿದ್ದು ಔಷದಿ ಸಿಂಪಡಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
6. ಬಿಟಿಎಸ್ ಮುಖ್ಯರಸ್ತೆಯಲ್ಲಿ ಪ್ರತಿನಿತ್ಯ ಒಳಚರಂಡಿ ನೀರುವ ಉಕ್ಕಿ ರಸ್ತೆಯಲ್ಲಿ ಸಂಚರಿಸುವವರಿಗೆ ತೀವ್ರ ತರಹದ ತೊಂದರೆಯಾಗುತ್ತಿದ್ದು, ಸಂಬಂಧಪಟ್ಟ ಇಲಾಖೆಯವರಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ತಂಡದ ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಈ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner